**ಉಪ ಕಾರ್ಮಿಕ ಆಯುಕ್ತರು**
ಪ್ರಾದೇಶಿಕ -2, ಬೆಂಗಳೂರು
ರವರ ಕಛೇರಿ

**ಕರ್ನಾಟಕ ಸರ್ಕಾರ**
**ಕಾರ್ಮಿಕ ಇಲಾಖೆ**

"ಕಾರ್ಮಿಕ ಭವನ", ಐಟಿಐ ಕಾಲೇಜ್
ಕಾಂಪೌಂಡ್, ಬನ್ನೇರುಘಟ್ಟ ರಸ್ತೆ,
ಬೆಂಗಳೂರು-560 029
ಕಛೇರಿ: 080-26086253/264
080 29753078

ಸಂಖ್ಯೆ:ಉಕಾಆಬೆಂ-2/ Election /2023-24

ದಿನಾಂಕ:26.04.2023

## ಕಛೇರಿ ಆದೇಶ

ವಿಷಯ: ವಿಧಾನಸಭಾಚುನಾವಣೆ-2023ರ ಹಿನ್ನೆಲೆಯಲ್ಲಿ ಮತದಾರರ ಪಟ್ಟಿಯಲ್ಲಿ ಹೆಸರಿರುವ ಎಲ್ಲಾ ಕಾರ್ಮಿಕರಿಗೆ ಮೇ 10 ರಂದು ಕಡ್ಡಾಯವಾಗಿ ರಜೆ ನೀಡುವಂತೆ ಹಾಗೂ ಮತದಾರರು ಕಡ್ಡಾಯವಾಗಿ ಮತಚಲಾಯಿಸುವಂತೆ ಕಾರ್ಯವ್ಯಾಪ್ತಿಯ ಕಾರ್ಖಾನೆಗಳು ಮತ್ತು ಸಂಸ್ಥೆಗಳಲ್ಲಿನ ಕಾರ್ಮಿಕರಿಗೆ ಅರಿವು ಮೂಡಿಸುವ ಬಗ್ಗೆ.

ಉಲ್ಲೇಖ: ಮಾನ್ಯ ಮುಖ್ಯ ಚುನಾವಣಾಧಿಕಾರಿಗಳು, ಕರ್ನಾಟಕ ಇವರ ಪತ್ರ ಸಂಖ್ಯೆ DPAR 105 CHUVISA 2023 (P-1) ದಿನಾಂಕ:24.04.2023

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರದನ್ವಯ ಮಾನ್ಯ ಮುಖ್ಯ ಚುನಾವಣಾಧಿಕಾರಿಗಳು, ಕರ್ನಾಟಕ ಇವರು ಎಲ್ಲಾ ಮತದಾರ ಕಾರ್ಮಿಕರಿಗೆ ವಿಧಾನಸಭಾ ಚುನಾವಣೆ-2023 ರ ಹಿನ್ನೆಲೆಯಲ್ಲಿ ಕಡ್ಡಾಯವಾಗಿ ಮತಚಲಾಯಿಸುವಂತೆ ಮಾಡಲು ಎಲ್ಲಾ ಕಾರ್ಖಾನೆಗಳು ಹಾಗೂ ಸಂಸ್ಥೆಗಳು ಚುನಾವಣಾ ದಿನದಂದು ಕಡ್ಡಾಯವಾಗಿ ವೇತನ ಸಹಿತ ರಜೆಯನ್ನು ನೀಡಲು ಕ್ರಮ ಕೈಗೊಳ್ಳುವಂತೆ ಸೂಚಿಸಿರುತ್ತಾರೆ. ಕೈಗಾರಿಕಾ ಸಂಸ್ಥೆಗಳ (ರಾಷ್ಟ್ರೀಯ ಮತ್ತು ಹಬ್ಬದ ರಜೆಗಳು) ಕಾಯ್ದೆ, 1963 ರ ಕಲಂ.3(ಎ) ರನ್ವಯ ವಿಧಾನಸಭೆ ಚುನಾವಣೆಗೆ ಮತದಾರರ ಪಟ್ಟಿಯಲ್ಲಿ ಹೆಸರಿರುವ ಎಲ್ಲಾ ಕಾರ್ಮಿಕರಿಗೆ ವೇತನ ಸಹಿತ ರಜೆಯನ್ನು ನೀಡಬೇಕಾಗಿರುತ್ತದೆ. ಆದ್ದರಿಂದ ನಿಮ್ಮ ಕಾರ್ಯವ್ಯಾಪ್ತಿಯ ಎಲ್ಲಾ ಕಾರ್ಖಾನೆ ಮತ್ತು ವಿವಿಧ ಸಂಸ್ಥೆಗಳಿಗೆ ಪತ್ರ ಬರೆದು ಮಾಹಿತಿ ನೀಡುವಂತೆ ಹಾಗೂ ದಿನಾಂಕ 10 ನೇ ಮೇ ರಂದು ನಡೆಯಲಿರುವ ವಿಧಾನಸಭಾ ಚುನಾವಣೆಯಲ್ಲಿ ಮತ ಚಲಾಯಿಸಲು ಅರ್ಹಕಾರ್ಮಿಕರಿಗೆ ವೇತನ ಸಹಿತ ರಜೆಯನ್ನು ನೀಡಲು ಕ್ರಮವಹಿಸುವಂತೆ ಈ ಮೂಲಕ ಆದೇಶಿಸಿದೆ.

HL
(ಗುರುಪ್ರಸಾದ್ ಹೆಚ್. ಎಲ್)
ಉಪ ಕಾರ್ಮಿಕ ಆಯುಕ್ತರು
ಪ್ರಾದೇಶಿಕ-2, ಬೆಂಗಳೂರು

**ಇವರಿಗೆ:**

ಕಾರ್ಮಿಕ ಅಧಿಕಾರಿಗಳು, ಉಪವಿಭಾಗ-3,4,6,7 ಬೆಂಗಳೂರು, ಚಿಕ್ಕಬಳ್ಳಾಪುರ, ಕೋಲಾರ, ಮೈಸೂರು, ಚಾಮರಾಜನಗರ, ಮಂಡ್ಯ.

**ಪ್ರತಿಯನ್ನು :**

1) ಸಹಾಯಕ ಕಾರ್ಮಿಕ ಆಯುಕ್ತರು, ವಿಭಾಗ-3,4 ಬೆಂಗಳೂರು & ಮೈಸೂರು ಇವರಿಗೆ ಅನುಸರಣಾ ಕ್ರಮಕ್ಕಾಗಿ ಕಳುಹಿಸಿದೆ
2) ಮಾನ್ಯ ಕಾರ್ಮಿಕ ಆಯುಕ್ತರು, ಕಾರ್ಮಿಕ ಭವನ, ಬೆಂಗಳೂರು ಇವರಿಗೆ ಮಾಹಿತಿಗಾಗಿ ಸಲ್ಲಿಸಿದೆ.